(SH)

# ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಸಾಯಿಕ್ರಿಷ್ ಪ್ಯಾರಾ ಮೆಡಿಕಲ್ ಇನ್‌ಸ್ಟಿಟ್ಯೂಟ್, ಕೆ.ಜಿ.ಎಫ್ ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯವನ್ನು ಒದಗಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 50 ಎಂಎಸಿ 2015, ದಿನಾಂಕ:19.10.2015.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣಸೇವೆಗಳು ಇವರ ಪತ್ರ ಸಂಖ್ಯೆ: ಎಂಡಿಪಿ (ಕ್ಲಿ)/58/ 2015–16, ದಿನಾಂಕ:21.03.2016 ಮತ್ತು 14.09.2016.

*****

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಸರ್ಕಾರಿ ಆದೇಶದಲ್ಲಿ ಸಾಯಿಕ್ರಿಷ್ ಪ್ಯಾರಾ ಮೆಡಿಕಲ್ ಇನ್‌ಸ್ಟಿಟ್ಯೂಟ್, ಕೆ.ಜಿ.ಎಫ್ ಇಲ್ಲಿ ಡಿ.ಎಂ.ಎಕ್ಸ್.ಟಿ ಮತ್ತು ಡಿ.ಹೆಚ್.ಐ ಪ್ಯಾರಾ ಮೆಡಿಕಲ್ ಕೋರ್ಸ್‌ಗಳನ್ನು ಪ್ರಾರಂಭಿಸಲು ಮಾನ್ಯತೆ ನೀಡಿ ಆದೇಶ ಹೊರಡಿಸಲಾಗಿದೆ.

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಸಾಯಿಕ್ರಿಷ್ ಪ್ಯಾರಾ ಮೆಡಿಕಲ್ ಇನ್‌ಸ್ಟಿಟ್ಯೂಟ್, ಕೆ.ಜಿ.ಎಫ್ ಇಲ್ಲಿ ವ್ಯಾಸಂಗ ಮಾಡುತ್ತಿರುವ ಡಿ.ಎಂ.ಎಕ್ಸ್.ಟಿ ಮತ್ತು ಡಿ.ಹೆಚ್.ಐ ಪ್ಯಾರಾ ಮೆಡಿಕಲ್ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ಕೆ.ಜಿ.ಎಫ್ ಇಲ್ಲಿ ಕ್ಲಿನಿಕಲ್ ಸೌಲಭ್ಯವನ್ನು ಒದಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ರವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 100 ಸಿಜಿಎಂ 2016,**
**ಬೆಂಗಳೂರು ದಿನಾಂಕ:17.10.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸಾಯಿಕ್ರಿಷ್ ಪ್ಯಾರಾ ಮೆಡಿಕಲ್ ಇನ್‌ಸ್ಟಿಟ್ಯೂಟ್, ಕೆ.ಜಿ.ಎಫ್ ಇಲ್ಲಿ ವ್ಯಾಸಂಗ ಮಾಡುತ್ತಿರುವ ಡಿ.ಎಂ.ಎಕ್ಸ್.ಟಿ ಮತ್ತು ಡಿ.ಹೆಚ್.ಐ ಪ್ಯಾರಾಮೆಡಿಕಲ್ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ಕೆ.ಜಿ.ಎಫ್ ಇಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಕ್ಲಿನಿಕಲ್ ಸೌಲಭ್ಯವನ್ನು ಒದಗಿಸಲು ಸರ್ಕಾರ ಮಂಜೂರಾತಿ ನೀಡಿದೆ.

1) ನೀಡಲಾಗಿರುವ ಕ್ಲಿನಿಕಲ್ ಸೌಲಭ್ಯದ ಅವಧಿಯು ಮೂರು ವರ್ಷಗಳಿಗೆ ಮಾತ್ರ ಸೀಮಿತವಾಗಿರುತ್ತದೆ.

2) ಪ್ರಸ್ತುತ ವರ್ಷದಲ್ಲಿ ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ನಿಗಧಿತ ಶುಲ್ಕದ ಹಣವನ್ನು ಪೂರ್ಣ ಮತ್ತು ಮುಂಗಡವಾಗಿಯೇ ಪಾವತಿಸಿಕೊಂಡ ನಂತರವೇ ಸಂಸ್ಥೆಯ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ನೀಡತಕ್ಕದ್ದು. ತಪ್ಪಿದ್ದಲ್ಲಿ ಸಂಬಂಧಿಸಿದ ಜಿಲ್ಲಾ ಶಸ್ತ್ರಚಿಕಿತ್ಸಕರು ಹೊಣೆಗಾರರಾಗಿರುತ್ತಾರೆ.

| C/W | Sup. | AAO | DS |
|---|---|---|---|
| [signature] | [signature] | [signature] | [signature] 27/10/16 |

[signature] S.V 17/10/16

..2

3) ಕ್ಲಿನಿಕಲ್ ಸೌಲಭ್ಯ ನೀಡಿದ ಅವಧಿಯಲ್ಲಿ ವಿದ್ಯಾರ್ಥಿಗಳಿಂದ ಸರ್ಕಾರಿ ಆಸ್ಪತ್ರೆಗೆ ನಷ್ಟ ಉಂಟಾದಲ್ಲಿ ಈ ನಷ್ಟವನ್ನು ಸದರಿ ಸಂಸ್ಥೆಯೇ ಭರಿಸತಕ್ಕದ್ದು.

4) ಸದರಿ ಆದೇಶವನ್ನು ಹೊರಡಿಸಿದ ಮೂರು ತಿಂಗಳೊಳಗಾಗಿ ಕ್ಲಿನಿಕಲ್ ಸೌಲಭ್ಯವನ್ನು ಉಪಯೋಗಿಸಿಕೊಳ್ಳದೇ ಹೋದಲ್ಲಿ ಈ ಆದೇಶವನ್ನು ರದ್ದುಗೊಳಿಸಿದೆಯೆಂದು ಭಾವಿಸತಕ್ಕದ್ದು.

5) ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸತಕ್ಕಂತಹ ಸರ್ಕಾರಿ ಕೋಟಾದ ಸೀಟುಗಳನ್ನು ನೀಡತಕ್ಕದ್ದು.

6) ಪ್ಯಾರಾಮೆಡಿಕಲ್ ಬೋರ್ಡ್ ನಿಬಂದನೆಯಂತೆ ಈ ಸಂಸ್ಥೆಯ ಆಡಳಿತ ಮಂಡಳಿ ಮುಂದಿನ ಐದು ವರ್ಷಗಳ ಒಳಗಾಗಿ ತಮ್ಮದೇ ಆದ 100 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಯನ್ನು ನಿರ್ಮಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

S.V 17/10/16
(ಎಸ್.ವಿ.ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಆರೋಗ್ಯ 1&2)

ಇವರಿಗೆ:

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-09.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-09.
3. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಕೋಲಾರ.
4. ಜಿಲ್ಲಾ ಶಸ್ತ್ರಚಿಕಿತ್ಸಕರು, ಸಾರ್ವಜನಿಕ ಆಸ್ಪತ್ರೆ, ಕೆ.ಜಿ.ಎಫ್-563 122.
5. ಪ್ರಾಂಶುಪಾಲರು, ಸಾಯಿಕ್ರಿಷ್ ಪ್ಯಾರಾ ಮೆಡಿಕಲ್ ಇನ್‌ಸ್ಟಿಟ್ಯೂಟ್, ಕೃಷ್ಣ ಭವನ್, ಸ್ಮಿತ್ ರೋಡ್, ಊರ್‌ಗಾಮ್ ಅಂಚೆ, ಕೆ.ಜಿ.ಎಫ್.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.